# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 24 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.02.2023 |
| ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪರವಾನಗಿ ಪಡೆದಿರುವ ಸರ್ಕಾರಿ ಮತ್ತು ಖಾಸಗಿ ಡಯಾಲಿಸಿಸ್ ಕೇಂದ್ರಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು) | ಒಟ್ಟು ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ = 410<br>ಸರ್ಕಾರಿ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ= 169<br>ಖಾಸಗಿ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ = 241<br>(ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ.) |
| ಆ) | ಡಯಾಲಿಸಿಸ್ ಗೆ ಒಳಗಾಗುವ ಸಾರ್ವಜನಿಕರಿಗೆ ಹಾಗೂ ಹಿರಿಯ ನಾಗರೀಕರಿಗೆ ಸರ್ಕಾರದಿಂದ ಉಚಿತ ವೈದ್ಯಕೀಯ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ; ಹೌದಾದಲ್ಲಿ, ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಎಷ್ಟು ಜನರು ಇದರ ಪ್ರಯೋಜನ ಪಡೆದಿದ್ದಾರೆ; (ಜಿಲ್ಲಾವಾರು ಅಂಕಿ ಅಂಶಗಳ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ 146 ತಾಲ್ಲೂಕು ಆಸ್ಪತ್ರೆಗಳು ಹಾಗೂ 23 ಜಿಲ್ಲಾ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಚಿಕಿತ್ಸೆಯನ್ನು ಉಚಿತವಾಗಿ ಒದಗಿಸಲಾಗುತ್ತಿದೆ. ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ. |
| ಇ) | ದಾವಣಗೆರೆಯಲ್ಲಿ ಹೊಸದಾಗಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರವು ಉದ್ದೇಶಿಸಿದೆಯೇ; ಹಾಗಿದ್ದಲ್ಲಿ, ಎಲ್ಲೆಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಯೋಜಿಸಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು.) | ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲ್ಲೂಕಿನಲ್ಲಿ ಎರಡು ಡಯಾಲಿಸಿಸ್ ಯಂತ್ರಗಳ ಚಿಕಿತ್ಸಾ ಘಟಕವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. |
| ಈ) | ರಾಜ್ಯದಲ್ಲಿ ಮೂತ್ರಪಿಂಡ ವೈಫಲ್ಯ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದ ಕಾರ್ಯಯೋಜನೆಗಳೇನು: | • ರಾಜ್ಯದಲ್ಲಿ ಒಟ್ಟು 30 ಜಿಲ್ಲಾ ಆಸ್ಪತ್ರೆ ಎನ್.ಸಿ.ಡಿ ಕ್ಲಿನಿಕ್, 347 ಸಿ.ಹೆಚ್.ಸಿ. ಎನ್.ಸಿ.ಡಿ ಕ್ಲಿನಿಕ್ ಮತ್ತು 9160 ಉಪಕೇಂದ್ರಗಳನ್ನು ಆರೋಗ್ಯ ಕ್ಷೇಮ ಕೇಂದ್ರಗಳನ್ನಾಗಿ ಪರಿವರ್ತಿಸಿದ್ದು, ಸಿ.ಹೆಚ್.ಓ ಗಳನ್ನು ನೇಮಿಸಲಾಗಿರುತ್ತದೆ.<br>• 30 ವರ್ಷ ಮೇಲ್ಪಟ್ಟವರಿಗೆ ರಕ್ತದೊತ್ತಡ, ಮಧುಮೇಹ ರೋಗಗಳ ಬಗ್ಗೆ ಪ್ರಾಥಮಿಕ ಹಂತದಲ್ಲೇ ಪರೀಕ್ಷೆಗೆ ಒಳಪಟ್ಟು, ಚಿಕಿತ್ಸೆ ನೀಡಲಾಗುತ್ತಿದೆ.<br>• ಜನಸಂಖ್ಯೆ ಆಧಾರಿತ ತಪಾಸಣೆ ಕಾರ್ಯಕ್ರಮದ ಅಡಿಯಲ್ಲಿ ಮನೆ-ಮನೆ ಭೇಟಿ ಮಾಡಿ ಅಸಾಂಕ್ರಾಮಿಕ ರೋಗಗಳ ಬಗ್ಗೆ, ನೊಂದಾಣಿ, ತಪಾಸಣೆ ಹಾಗೂ ಅರಿವು ಮೂಡಿಸಲಾಗುತ್ತಿದೆ. |

| | | |
|---|---|---|
| | | • ಔಟ್‌ರಿಚ್ ಶಿಬಿರಗಳು, ಕರಪತ್ರಗಳು, ಭಿತ್ತಿಪತ್ರಗಳ ಪ್ರದರ್ಶನ, ದೃಶ್ಯ ಮಾಧ್ಯಮಗಳು ಮತ್ತು ಮುದ್ರಣ ಮಾಧ್ಯಮಗಳ ಮುಖಾಂತರ ಅಸಾಂಕ್ರಾಮಿಕ ರೋಗಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>ಈ ಮೇಲ್ಕಂಡ ಕಾರ್ಯಕ್ರಮಗಳ ಮೂಲಕ ಮಧುಮೇಹ ರೋಗ ಮತ್ತು ರಕ್ತದೊತ್ತಡ ಕಾಯಿಲೆಗಳನ್ನು ಪ್ರಾಥಮಿಕ ಹಂತದಲ್ಲಿ ಗುರುತಿಸಿ ಚಿಕಿತ್ಸೆ ನೀಡಿ ಹಾಗೂ ರೋಗಿಗಳ ಮರು ಭೇಟಿ ಮಾಡುವುದರಿಂದ ಮೂತ್ರಪಿಂಡ ವೈಫಲ್ಯವನ್ನು ತಡೆಗಟ್ಟಬಹುದಾಗಿರುತ್ತದೆ.<br><br>ಪ್ರಸ್ತುತ ಪ್ರಧಾನಮಂತ್ರಿ ರಾಷ್ಟ್ರೀಯ ಡಯಾಲಿಸಿಸ್ ಕಾರ್ಯಕ್ರಮದಡಿಯಲ್ಲಿ ರಾಜ್ಯದಲ್ಲಿ 169 ಕೇಂದ್ರಗಳಲ್ಲಿ ಡಯಾಲಿಸಿಸ್ ಸೇವೆ ಒದಗಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ 235 ಕೇಂದ್ರಗಳಲ್ಲಿ ಡಯಾಲಿಸಿಸ್ ಸೇವೆಯನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಉ) | ಇತ್ತೀಚೆಗೆ ಡಯಾಲಿಸಿಸ್‌ಗೆ ಒಳಗಾಗುವವರ ಸಂಖ್ಯೆ ಹೆಚ್ಚುತ್ತಿದ್ದು, ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತಷ್ಟು ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರವು ಯೋಜಿಸಿದೆಯೇ? | ರಾಜ್ಯದ 4 ವಿಭಾಗಗಳಲ್ಲಿ ಆದ್ಯಾನುಸಾರ ಒಟ್ಟು 235 ಕೇಂದ್ರಗಳಲ್ಲಿ ಡಯಾಲಿಸಿಸ್ ಸೇವೆಯನ್ನು ಒದಗಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ:** ಆಕುಕ 09 ಎಸ್.ಟಿ.ಕ್ಯೂ 2023

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು